**All India Radio: Bangalore**
**Regional Bulletin In Kannada**
**28.06.2026 / 2.30 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**28.06.2026 / 2.30 p.m.**

**<><><><>**

ಮುಖ್ಯಾಂಶಗಳು

1. ಸಮಾಜದಲ್ಲಿರುವ ಮೂಢನಂಬಿಕೆಗಳನ್ನು ವೈಜ್ಞಾನಿಕ ಚಿಂತನೆಯ ಮೂಲಕ ನಿವಾರಿಸುವ ಅಗತ್ಯವನ್ನು ಪ್ರತಿಪಾದಿಸಿದ ಪ್ರಧಾನಿ ನರೇಂದ್ರ ಮೋದಿ
2. ಸಂಪೂರ್ಣ ಆರೋಗ್ಯಕರ ಮತ್ತು ವ್ಯಸನಮುಕ್ತ ರಾಷ್ಟ್ರ ನಿರ್ಮಿಸುವತ್ತ ಮುನ್ನುಗ್ಗಬೇಕು: ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್
3. ಐದು ವರ್ಷದೊಳಗಿನ ಎಲ್ಲ ಮಕ್ಕಳಿಗೂ ಪೋಲಿಯೋ ಲಸಿಕೆ ಹಾಕಿಸಿ: ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಕರೆ
4. ಇಂದು ರಾಷ್ಟ್ರೀಯ ಪೋಲಿಯೋ ಲಸಿಕೆ ದಿನ ಆಚರಣೆ: ಅಂದಾಜು ೬೨ ಲಕ್ಷ ಮಕ್ಕಳಿಗೆ ಲಸಿಕೆ ನೀಡುವ ಗುರಿ

<><><><>

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಇಂದು ಆಕಾಶವಾಣಿಯ ಜನಪ್ರಿಯ ಕಾರ್ಯಕ್ರಮ 'ಮನ್ ಕಿ ಬಾತ್' ಕಾರ್ಯಕ್ರಮದಲ್ಲಿ ದೇಶದ ಭದ್ರತೆ, ಸ್ವಾವಲಂಬನೆ, ಜನಸಹಭಾಗಿತ್ವ, ಪರಿಸರ ಸಂರಕ್ಷಣೆ, ಕ್ರೀಡೆ, ತಂತ್ರಜ್ಞಾನ ಹಾಗೂ ಭಾರತೀಯ ಸಂಸ್ಕೃತಿಯ ಜಾಗತಿಕ ವಿಸ್ತರಣೆ ಸೇರಿದಂತೆ ಹಲವು ಮಹತ್ವದ ವಿಷಯಗಳ ಕುರಿತು ದೇಶವನ್ನು ಉದ್ದೇಶಿಸಿ ಮಾತನಾಡಿದರು. ಸಮಾಜದಲ್ಲಿರುವ ಮೂಢನಂಬಿಕೆಗಳನ್ನು ವೈಜ್ಞಾನಿಕ ಚಿಂತನೆಯ ಮೂಲಕ ನಿವಾರಿಸುವ ಅಗತ್ಯವನ್ನು ಒತ್ತಿ ಹೇಳಿದ ಪ್ರಧಾನಿ, ಅಸ್ಸಾಂನಲ್ಲಿ ಹರ್ಗಿಲಾ ಪಕ್ಷಿ ಸಂರಕ್ಷಣೆಗೆ ಜೀವಶಾಸ್ತ್ರಜ್ಞೆ ಪೂರ್ಣಿಮಾ ದೇವಿ ಬರ್ಮನ್ ನೇತೃತ್ವದಲ್ಲಿ ರೂಪುಗೊಂಡಿರುವ 'ಹರ್ಗಿಲಾ ಆರ್ಮಿ'ಯ ಕಾರ್ಯವನ್ನು ಮೆಚ್ಚುಗೆ ವ್ಯಕ್ತಪಡಿಸಿದರು. ಸರಿಯಾದ ಮಾಹಿತಿ ಮತ್ತು ಜನಜಾಗೃತಿಯಿಂದ ಸಮಾಜದಲ್ಲಿ ಸಕಾರಾತ್ಮಕ ಬದಲಾವಣೆ ತರಲು ಸಾಧ್ಯ ಎಂದು ಹೇಳಿದರು. ದೇಶದಲ್ಲಿ ಕ್ರೀಡಾ ಸಂಸ್ಕೃತಿ ಬೆಳೆಯುತ್ತಿರುವುದನ್ನು ಉಲ್ಲೇಖಿಸಿದ ಪ್ರಧಾನಿ, ನಾಗಾಲ್ಯಾಂಡ್‌ನಲ್ಲಿ ಯಶಸ್ವಿಯಾಗಿ

ನಡೆಯುತ್ತಿರುವ ನಾಗಾಲ್ಯಾಂಡ್ ಬೇಬಿ ಲೀಗ್ ಹಾಗೂ ನಾಗಾಲ್ಯಾಂಡ್ ಮಹಿಳಾ ಫುಟ್ಸಲ್ ಲೀಗ್‌ಗಳನ್ನು ಶ್ಲಾಘಿಸಿದರು. ಈ ಉಪಕ್ರಮಗಳು ಮಕ್ಕಳ ಹಾಗೂ ಮಹಿಳೆಯರ ಕ್ರೀಡಾ ಪ್ರತಿಭೆಗೆ ಉತ್ತಮ ವೇದಿಕೆ ಒದಗಿಸುತ್ತಿವೆ ಎಂದರು. ತಂತ್ರಜ್ಞಾನ ಮತ್ತು ಭಾರತೀಯ ಜ್ಞಾನ ಪರಂಪರೆಯ ಸಮನ್ವಯದ ಕುರಿತು ಮಾತನಾಡಿದ ಪ್ರಧಾನಿ, ನಳಂದಾ ವಿಶ್ವವಿದ್ಯಾಲಯದಲ್ಲಿ ತಾರ್ಕಿಕ ಚರ್ಚೆಯ ಸಂಪ್ರದಾಯ ಪುನರುಜ್ಜೀವನಗೊಳ್ಳುತ್ತಿರುವುದನ್ನು ಹಾಗೂ ಕೇಂದ್ರೀಯ ಸಂಸ್ಕೃತ ವಿಶ್ವವಿದ್ಯಾಲಯ ಕೃತಕ ಬುದ್ಧಿಮತ್ತೆ ಮತ್ತು ದತ್ತಾಂಶ ವಿಜ್ಞಾನದಲ್ಲಿ ಬಿ.ಟೆಕ್ ಕೋರ್ಸ್ ಆರಂಭಿಸಿರುವುದನ್ನು ಶ್ಲಾಘಿಸಿದರು. ಇದರಿಂದ ಭಾರತೀಯ ಭಾಷೆಗಳು ಮತ್ತು ಪುರಾತನ ಗ್ರಂಥಗಳ ಡಿಜಿಟಲ್ ಸಂರಕ್ಷಣೆಗೆ ಹೊಸ ಅವಕಾಶಗಳು ಸೃಷ್ಟಿಯಾಗಲಿವೆ ಎಂದರು. ಡೊಮಿನಿಕನ್ ರಿಪಬ್ಲಿಕ್‌ನಲ್ಲಿ 'ಬ್ರಹ್ಮಕಮಲ್ ಡೊಮಿನಿಕಾನಾ' ತಂಡವು ವೈದಿಕ ಮಂತ್ರಗಳ ಅಧ್ಯಯನ ಮತ್ತು ಭಾರತೀಯ ಆಧ್ಯಾತ್ಮಿಕ ಪರಂಪರೆಯ ಪ್ರಸಾರದಲ್ಲಿ ತೊಡಗಿಸಿಕೊಂಡಿರುವುದನ್ನು ಪ್ರಧಾನಿ ಮೆಚ್ಚುಗೆ ವ್ಯಕ್ತಪಡಿಸಿದರು. ವಿಶ್ವದ ವಿವಿಧ ಭಾಗಗಳಲ್ಲಿ ಭಾರತೀಯ ಸಂಸ್ಕೃತಿಗೆ ಹೆಚ್ಚುತ್ತಿರುವ ಗೌರವ ಸಂತಸದ ವಿಷಯ ಎಂದು ಹೇಳಿದರು. ಮುಂಬರುವ ಗಣೇಶೋತ್ಸವದ ಹಿನ್ನೆಲೆಯಲ್ಲಿ ಸ್ಥಳೀಯ ಕುಂಬಾರರು ತಯಾರಿಸಿದ ಜೇಡಿಮಣ್ಣಿನ ಗಣೇಶ ಮೂರ್ತಿಗಳಿಗೆ ಆದ್ಯತೆ ನೀಡುವಂತೆ ಹಾಗೂ ಪ್ಲಾಸ್ಟರ್ ಆಫ್ ಪ್ಯಾರಿಸ್‌ನ ಮೂರ್ತಿಗಳನ್ನು ಬಳಸಬಾರದೆಂದು ಪ್ರಧಾನಿ ಮನವಿ ಮಾಡಿದರು. ಇದರಿಂದ ಪರಿಸರ ಸಂರಕ್ಷಣೆ ಹಾಗೂ 'ವೋಕಲ್ ಫಾರ್ ಲೋಕಲ್' ಅಭಿಯಾನಕ್ಕೆ ಬಲ ಸಿಗಲಿದೆ ಎಂದು ಹೇಳಿದರು.

ಧ್ವನಿ : ಪ್ರಧಾನಿ ನರೇಂದ್ರ ಮೋದಿ (೩೨ ಸೆಕೆಂಡ್‌ಗಳು)

<><><><>

ನಶಾ ಮುಕ್ತ ಭಾರತ ಅಭಿಯಾನದ ಅಡಿಯಲ್ಲಿ ಕರ್ನಾಟಕ ರಾಜ್ಯವನ್ನು ಸಂಪೂರ್ಣವಾಗಿ ಆರೋಗ್ಯಕರ ಮತ್ತು ವ್ಯಸನಮುಕ್ತ ರಾಷ್ಟ್ರವನ್ನಾಗಿ ನಿರ್ಮಿಸುವತ್ತ ಮುನ್ನುಗ್ಗಬೇಕು ಎಂದು ಭಾರತದ ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ತಿಳಿಸಿದ್ದಾರೆ. ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ವತಿಯಿಂದ ಬೆಂಗಳೂರಿನ ಶ್ರೀ ಕಂಠೀರವ ಹೊರಾಂಗಣ ಕ್ರೀಡಾಂಗಣದಲ್ಲಿ ಆಯೋಜಿಸಲಾಗಿದ್ದ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ೩೦ನೇ ಸಂಸ್ಥಾಪನಾ ದಿನಾಚರಣೆ ಮತ್ತು ನಶಾ ಮುಕ್ತ ಭಾರತ್ ಅಭಿಯಾನ

ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು. ಸಮಾಜ ಮತ್ತು ರಾಷ್ಟ್ರಕ್ಕೆ ಉತ್ತಮ ಭವಿಷ್ಯವನ್ನು ಸೃಷ್ಟಿಸಲು ಅರಿವು, ಜವಾಬ್ದಾರಿ ಮತ್ತು ಸಾಮೂಹಿಕ ಪ್ರಯತ್ನ ಅತ್ಯಗತ್ಯ ಆದ್ದರಿಂದ ಇಂದಿನ ಯುವ ಪೀಳಿಗೆ ಆರೋಗ್ಯಕರ ಮತ್ತು ವ್ಯಸನ ಮುಕ್ತ ರಾಷ್ಟ್ರವನ್ನು ನಿರ್ಮಿಸುವತ್ತ ಹೆಜ್ಜೆ ಇಡಬೇಕು ಎಂದರು. ರಾಜ್ಯಪಾಲರಾದ ಥಾವರ್ ಚಂದ್ ಗೆಹಲೋಟ್, ರಾಜೀವ್ ಗಾಂಧಿ ವಿಶ್ವ ವಿದ್ಯಾಲಯದ ಕುಲಪತಿ ಡಾ.ಭಗವಾನ್, ಐಪಿಎಸ್ ಸಚ್ಚಿನ್ ಗೋರ್ಪಡೆ, ಆಂಧ್ರ ಪ್ರದೇಶ ರಾಜ್ಯಪಾಲರಾದ ಎಸ್.ಅಬ್ದುಲ್ ನಜೀರ್ ಅವರು ಮಾತನಾಡಿ ನಶಾ ಮುಕ್ತ ಭಾರತದ ಬಗ್ಗೆ ಅರಿವು ಮೂಡಿಸಿದರು. ಕಾರ್ಯಕ್ರಮದಲ್ಲಿ ರಾಜೀವ್ ಗಾಂಧಿ ವಿಶ್ವ ವಿದ್ಯಾಲಯಯಾದ ಕುಲಪತಿ ಡಾ.ಭಗವಾನ್ ಅವರು ವಿದ್ಯಾರ್ಥಿಗಳಿಗೆ ಮಾದಕ ವಸ್ತುಗಳ ದುಷ್ಪರಿಣಾಮಗಳು, ಹಾಗೂ ಆರೋಗ್ಯ ಸಮಸ್ಯೆಗಳ ಕುರಿತು ಜಾಗೃತಿ ಮೂಡಿಸಿ ಮಾದಕ ವಸ್ತು ವ್ಯಸನ ಮುಕ್ತ ರಾಷ್ಟ್ರಕ್ಕಾಗಿ ಪ್ರತಿಜ್ಞಾ ವಿಧಿ ಬೋಧಿಸಿದರು.

ಧ್ವನಿ: ಉಪರಾಷ್ಟ್ರಪತಿಗಳಾದ ಸಿ.ಪಿ. ರಾಧಾಕೃಷ್ಣನ್ (೩೦ ಸೆಕೆಂಡ್‌ಗಳು)

<><><>

‘ಮಕ್ಕಳ ಭವಿಷ್ಯಕ್ಕಾಗಿ ಸರ್ಕಾರ ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮ ರೂಪಿಸಿದ್ದು, ರಾಜ್ಯದ ಎಲ್ಲಾ ಭಾಗದ ಪೋಷಕರು ಐದು ವರ್ಷದೊಳಗಿನ ಮಕ್ಕಳಿಗೆ ಲಸಿಕೆ ಹಾಕಿಸಬೇಕು. ಆರೋಗ್ಯಕರ ಕುಟುಂಬದಿಂದ ಆರೋಗ್ಯಕರ ರಾಜ್ಯ ಹಾಗೂ ದೇಶ ನಿರ್ಮಾಣ ಸಾಧ್ಯ" ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಹೇಳಿದರು. ಸದಾಶಿವನಗರದ ತಮ್ಮ ನಿವಾಸದಲ್ಲಿ ಶಿವಕುಮಾರ್ ಅವರು ಪಲ್ಸ್ ಪೋಲಿಯೋ ಲಸಿಕೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಭಾನುವಾರ ಮಾತನಾಡಿದರು. ಕಾರ್ಯಕ್ರಮದಲ್ಲಿ ೩೬ ಸಾವಿರ ೬೮೬ ಲಸಿಕಾ ಕೇಂದ್ರಗಳು, ೯೮೮ ಸಂಚಾರಿ ಕೇಂದ್ರಗಳು, ೨ ಸಾವಿರದ ೧೨೫ ಮುಖ್ಯ ಕೇಂದ್ರಗಳು ಸೇರಿದಂತೆ ಒಟ್ಟು ೧ ಲಕ್ಷ ೧೪ ಸಾವಿರದ ೨೧೩ ಲಸಿಕಾ ಕಾರ್ಯಕರ್ತರು ಕಾರ್ಯ ನಿರ್ವಹಿಸುತ್ತಿದ್ದು, ಅನೇಕ ಎನ್.ಜಿ.ಓ.ಗಳು ಅಭಿಯಾನಕ್ಕೆ ಕೈಜೋಡಿಸಿ ದೇಶ ಸೇವೆಯ ಈ ಕಾರ್ಯಕ್ರಮಕ್ಕೆ ಸಹಕಾರ ನೀಡಿರುವುದು ಸಂತೋಷದ ತಂದಿದೆ ಎಂದು ಶುಭ ಕೋರಿದರು.

<><><>

ಪ್ರತಿ ವರ್ಷದಂತೆ ಈ ವರ್ಷವೂ ಜೂನ್ ೨೮ ರಂದು ರಾಷ್ಟ್ರೀಯ ಲಸಿಕಾ ದಿನವನ್ನಾಗಿ ಆಚರಿಸಲಾಗುವುದು. ಪ್ರತಿ ವರ್ಷದಂತೆ ಈ ವರ್ಷವೂ ಕೂಡ ಹಮ್ಮಿಕೊಳ್ಳಲಾಗಿರುವ ಒಂದು

ಸುತ್ತಿನ ಪಲ್ಸ್ ಪೋಲಿಯೋ ಕಾರ್ಯಕ್ರಮದಲ್ಲಿ ಪ್ರತಿ ಮಗುವಿಗೆ ಎರಡು ಹನಿ ಪೋಲಿಯೋ ಲಸಿಕೆಯನ್ನು ನೀಡಲಿದ್ದು, ಅಂದಾಜು ೬೨ ಲಕ್ಷ ಮಕ್ಕಳನ್ನು ತಲುಪವ ಗುರಿ ಹೊಂದಿದೆ. ರಾಜ್ಯದ ಎಲ್ಲಾ ಆಸ್ಪತ್ರೆ, ಅಂಗನವಾಡಿಗಳಲ್ಲದೆ ಗುಡ್ಡಗಾಡು ಪ್ರದೇಶ, ಕಾಮಗಾರಿ ಪ್ರದೇಶ, ವಲಸೆ ಪ್ರದೇಶಗಳು, ಪಟ್ಟಣ, ನಗರ ಪ್ರದೇಶಗಳು, ರೈಲು ನಿಲ್ದಾಣಗಳು, ಕೊಳಚೆ ಪ್ರದೇಶಗಳು ಸೇರಿದಂತೆ ರಾಜ್ಯದ ಮೂಲೆ-ಮೂಲೆಗಳಲ್ಲಿ ಲಸಿಕಾ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಪಲ್ಸ್ ಪೋಲಿಯೋ ಕಾರ್ಯಕ್ರಮವನ್ನು ಜೂನ್ ೨೮ ರಿಂದ ಜುಲೈ ೦೧ ರವರಿಗೆ ರವರೆಗೆ ಹಮ್ಮಿಕೊಳ್ಳಲಾಗಿದ್ದು ಮಂಡ್ಯ ಜಿಲ್ಲೆಯಲ್ಲಿ ೫ ವರ್ಷದೊಳಗಿನ ಮಕ್ಕಳಿಗೆ ಪೋಲಿಯೋ ಲಸಿಕೆ ನೀಡಿ ಮಂಡ್ಯ ಜಿಲ್ಲೆಯನ್ನು ಪೋಲಿಯೋ ಮುಕ್ತ ಜಿಲ್ಲೆಯಾಗಿ ಮಾಡಬೇಕು ಎಂದು ಮಂಡ್ಯ ಶಾಸಕ ಪಿ. ರವಿಕುಮಾರ್ ಗಣಿಗ ತಿಳಿಸಿದ್ದಾರೆ. ಮಂಡ್ಯದ ಸಾದತ್ ನಗರದ ಸರ್ಕಾರಿ ಕಿರಿಯ ಉರ್ದು ಶಾಲೆಯಲ್ಲಿ ನಡೆದ ಪಲ್ಸ್ ಪೋಲಿಯೋ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಎರಡು ಹನಿ ಪೋಲಿಯೋ ಲಸಿಕೆ ಮಕ್ಕಳ ಜೀವನದ ಆರೋಗ್ಯ ರಕ್ಷೆ ಎಂದು ಹಾಸನ ಸಂಸದ ಶ್ರೇಯಸ್ ಪಟೇಲ್ ಕರೆ ನೀಡಿದ್ದಾರೆ. ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಆರೋಗ್ಯ ಇಲಾಖೆ ಹಾಗೂ ವಿವಿಧ ಇಲಾಖೆಗಳ ಸಹಯೋಗದಲ್ಲಿ ಹಾಸನದ ಮಹಿಳಾ ಮತ್ತು ಮಕ್ಕಳ ಆಸ್ಪತ್ರೆಯಲ್ಲಿ ಆಯೋಜಿಸಲಾಗಿದ್ದ ಪೋಲಿಯೋ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಕ್ಕಳಿಗೆ ಲಸಿಕೆ ಹಾಕುವ ಮೂಲಕ ಲಸಿಕಾ ಕಾರ್ಯಕ್ರಮಕ್ಕೆ ಇಂದು ಚಾಲನೆ ನೀಡಿದರು. ಬಾಗಲಕೋಟೆ ತಾಲೂಕಿನ ತಿಮ್ಮಾಪುರ ಗ್ರಾಮದಲ್ಲಿ ರಾಷ್ಟ್ರೀಯ ಪಲ್ಸ್ ಪೋಲಿಯೋ ಅಭಿಯಾನಕ್ಕೆ ಇಂದು ಶಾಸಕ ಉಮೇಶ್ ಎಚ್. ಮೇಟಿ ಚಾಲನೆ ನೀಡಿದ್ದಾರೆ. ಇಂದು ೩೦ ಸಾವಿರದ ೩೦೪ ಮಕ್ಕಳಿಗೆ ಪೋಲಿಯೋ ಹನಿ ನೀಡುವ ಗುರಿ ಹೊಂದಲಾಗಿದೆ. ಭಾರತ ಪೋಲಿಯೋ ಮುಕ್ತ ರಾಷ್ಟ್ರವಾಗಿದ್ದರೂ ಆ ಸಾಧನೆಯನ್ನು ಮುಂದುವರಿಸಿಕೊಂಡು ಹೋಗಲು ಪ್ರತಿಯೊಬ್ಬ ಪೋಷಕರ ಸಹಕಾರ ಅಗತ್ಯವಾಗಿದೆ ಎಂದು ಹೇಳಿದ್ದಾರೆ.

<><> ಇಲ್ಲಿಗೆ ಪ್ರದೇಸ ಸಮಾಚಾರ ಮುಗಿಯಿತು <><>